**<u>ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್ ಸಿ, ಹುಬ್ಬಳ್ಳಿ.</u>**

**C.C. - 1197-24** **ಪಿಡಬ್ಲ್ಯೂಃ** **<u>3</u>**

**ಸಿಡಬ್ಲ್ಯೂಃ** **<u>3</u>**

ಸಾಕ್ಷಿದಾರರ ಹೆಸರು ಃ ಶಾಹೀದ ಅಲ್ಲಿಸಾಬ ನದಾಫ

ತಂದೆ ಹೆಸರು ಃ ಅಲ್ಲಿಸಾಬ

ವಯಸ್ಸು ಃ 29 ವರ್ಷ

ಉದ್ಯೋಗ ಃ ವ್ಯಾಪಾರ

ವಾಸಸ್ಥಳ ಃ ಸವದತ್ತಿ

**ಸತ್ಯ ಪ್ರತಿಜ್ಞೆ ಮೇರೆಗೆ ದಿನಾಂಕಃ 14.08.2025 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ಸುಮಾರು 1 ವರೆ ವರ್ಷಗಳಿಂದ ಕುಸುಗಲ್ ರೋಡಿನ ಟಾಟಾ ಮೋಟಾರ್ಸ ಶೋ-ರೂಮ್ ಹತ್ತಿರ ನನ್ನ ವೈಯಕ್ತಿಕ ಕೆಲಸಕ್ಕೆ ಹೋದಾಗ ಅಲ್ಲಿದ್ದ ಪೋಲಿಸರು ಒಂದು ಪಂಚನಾಮೆಗೆ ನನ್ನ ಸಹಿ ಪಡೆದಿದ್ದಾರೆ. ಯಾವ ಕಾರಣಕ್ಕಾಗಿ ಪಡೆದಿದ್ದಾರೆ ಅಂತಾ ಗೊತ್ತಿಲ್ಲ. ಸಾಕ್ಷಿಗೆ ನಿಪಿ.4 ಪಂಚನಾಮೆ ತೋರಿಸಲಾಗಿ, ಅದರಲ್ಲಿರುವ ಸಹಿ ಗುರುತಿಸಿದ ಮೇರೆಗೆ ಸಾಕ್ಷಿ ಸಹಿ ನಿಪಿ.4-ಬಿ ಎಂದು ಗುರುತಿಸಲಾಯಿತು. ನಿಪಿ.4 ರಲ್ಲಿ ಏನು ಬರೆದಿದೆ ಅಂತಾ ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟಿ ಸವಾಲು ಮಾಡಲು ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದರು, ಅವರ ಮನವಿಯನ್ನು ಪರಿಗಣಿಸಿ, ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)

**ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ**

ದಿಃ 27.1.2024 ರಂದು ಮಃ 3.30 ರಿಂದ 4.30 ರ ಅವಧಿಯಲ್ಲಿ ಪೋಲಿಸರು ನನ್ನನ್ನು ಹಾಗೂ ಚಾಸಾ-2 ರವರನ್ನು ಘಟನಾ ಸ್ಥಳಕ್ಕೆ ಕರೆಸಿ ಅಲ್ಲಿ ಚಾಸಾ-1 ರವರು ಘಟನೆ ಕುರಿತು ಮಾಹಿತಿ ಹೇಳಿ ತೋರಿಸಿದ ಸ್ಥಳದಲ್ಲಿ ನಿಪಿ.4 ರಂತೆ ಪಂಚನಾಮೆ ಕ್ರಮ ಜರುಗಿಸಿ ಸ್ಥಳದಲ್ಲಿ ನನ್ನ ಸಹಿ ಪಡೆದಿದ್ದಾರೆ ಅಂದರೆ ಸರಿಯಲ್ಲ. ನನಗೆ ನಿಪಿ.4 ರಲ್ಲಿರುವ ಎಲ್ಲಾ ಸಂಗತಿ ಗೊತ್ತಿದ್ದರೂ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಅಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ಏನೂ ಇಲ್ಲವೆಂದು ಹೇಳಿದ್ದಾರೆ.**

**ಮರು ವಿಚಾರಣೆಃ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು.)

ಓ.ಹೇ.ಕೆ.ಸ.ಎ. ಒಪ್ಪಿಕೊಳ್ಳಲಾಯಿತು.

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು
ಹಾಗೂ ಜೆ ಎಂ ಎಫ್ ಸಿ, ಹುಬ್ಬಳ್ಳಿ.